''Azadi Ka Amrit Mahotsav''
INDIA@75
ಕೃಷಿ ವಿಶ್ವ ವಿದ್ಯಾನಿಲಯ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ಜಿ.ಕೆ.ವಿ.ಕೆ., ಬೆಂಗಳೂರು–560065

* ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ *

**ದಿನಾಂಕ:** 03.09.2021

## ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ

### ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)

(ದಿನಾಂಕ **04-09-2021** ರಿಂದ **08-09-2021**ವರೆಗೆ)

| ನಿಯತಾಂಕಗಳು | 04.09.2021 | 05.09.2021 | 06.09.2021 | 07.09.2021 | 08.09.2021 |
|---|---|---|---|---|---|
| ಮಳೆ (ಮಿ ಮಿ) | 16 | 13 | 12 | 13 | 8 |
| ಗರಿಷ್ಠ ಉಷ್ಣಾಂಶ °(ಡಿ.ಸೆ. ) | 27 | 28 | 29 | 29 | 29 |
| ಕನಿಷ್ಠ ಉಷ್ಣಾಂಶ (ಡಿ.ಸೆ. ) | 20 | 20 | 21 | 21 | 20 |
| ಮೋಡ (ಪ್ರಮಾಣ) | 7 | 7 | 4 | 4 | 4 |
| ಅರ್ದ್ರತೆ 7.20 ಬೆ (ಶೇ) | 93 | 93 | 93 | 93 | 91 |
| ಅರ್ದ್ರತೆ 2.20 ಮ (ಶೇ) | 76 | 76 | 75 | 75 | 75 |
| ಗಾಳಿಯ ವೇಗ (ಕಿ.ಮಿ/ಗಂಟೆಗೆ) | 4 | 5 | 6 | 6 | 7 |
| ಗಾಳಿಯ ದಿಕ್ಕು ( ಡಿಗ್ರಿ) | 283 | 248 | 270 | 257 | 252 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರದಿಂದ ಸಾದಾರಣ ಮಳೆ0ಯಾಗುವ ಸಾಧ್ಯತೆ ಇದೆ. ದಿನದ ಗರಿಷ್ಠ ಉಷ್ಣಾಂಶ **27.0-29.0°C** ಮತ್ತು ಕನಿಷ್ಠ **20.0-21.0°C** ಇರುವ ಸಾಧ್ಯತೆ ಇದೆ. ಬೆಳೆಗಿನ ಆರ್ದ್ರತೆ ಪ್ರಮಾಣ ಶೇ **91-93 %** ಇದ್ದು ಮಧ್ಯಾಹ್ನ **75-76 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ **4-7** ಕಿ.ಮೀ. ವೇಗದಲ್ಲಿ ಬೀಸುವ ಸ0ಭವವಿದೆ.

### "ಹುಬ್ಬೇ ಮಳೆ ಉಬ್ಬುಬ್ಬಿ ಸುರೀತದೆ !"

- ಹುಬ್ಬ ಮಳೆಯು ಕಾಲವು ಆಗಸ್ಟ್ ತಿಂಗಳ 31 ರಿಂದ ಸೆಪ್ಟೆಂಬರ್ ತಿಂಗಳ 12 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 80.4 ಮಿ.ಮೀ. ವರೆಗೆ ಮಳೆಯಾಗುತ್ತದೆ.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಮುಂದಿನ ನಾಲ್ಕೈದು ದಿನಗಳಲ್ಲಿ ಹಗುರ ಮಳೆಯ ಮುನ್ಸೂಚನೆ ಇದೆ, ತದನಂತರ ದೀರ್ಘಾವಧಿ ಹವಾಮಾನ ಮುನ್ಸೂಚನೆಯ ಪ್ರಕಾರ ಸೆಪ್ಟೆಂಬರ್ ಮೊದಲನೇ ಮತ್ತು ಎರಡನೇ ವಾರದ ವರೆಗೂ ಸರಾಸರಿ ಮಳೆಯ ಸಾಧ್ಯತೆ ಇರುವುದರಿಂದ ಮುಂಗಾರು ಬಿತ್ತನೆಯನ್ನು ಮುಂದುವರಿಸಿ.<br>➢ ಆರ್ಧ್ರತೆ ಹೆಚ್ಚಿರುವುದರಿಂದ ಬಿತ್ತನೆ ಮಾಡಿರುವ ಬೆಳೆಗಳಲ್ಲಿ ಕೀಟ ಹಾಗೂ ರೋಗಗಳು ಹೆಚ್ಚಬಹುದು. ಆದುದರಿಂದ ಬೆಳೆಗಳನ್ನಾಧರಿಸಿ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕು.<br>➢ ಎಲ್ಲೆಲ್ಲಿ ದೀರ್ಘಾವದಿ ಬೆಳೆಗಳು ( ತೊಗರಿ ಮತ್ತು ಹರಳು) ಬಿತ್ತನೆ ಮಾಡಿದಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.<br>➢ ತೊಗರಿಯಲ್ಲಿ ಗೂಡುಮಾರುಹುಳುವಿನ ಹತೋಟಿಗೆ ಹೂ ಬರುವ ಮೊದಲು ಕುಡಿಗಳ ಮೇಲೆ ಮಿಥೋಮಿಲ್ 40 ಎಸ್.ಪಿ 2 ಗ್ರಾಂ/ ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>➢ ಕಿತ್ತಂತಹ ಕಳೆ ಮತ್ತು ಬದುಗಳಲ್ಲಿ ಬೆಳೆದಿರುವ ಗ್ಲಿರೀಸಿಡಿಯ (ಹಸಿರೆಲೆ ಗೊಬ್ಬರದ ಗಿಡ) ಸೊಪ್ಪನ್ನು ಉಪಯೋಗಿಸಿಕೊಂಡು ಸಾಲುಗಳ ಮಧ್ಯದಲ್ಲಿ ಭೂ–ಹೊದಿಕೆಯಾಗಿ ಹರಡುವುದು<br>➢ ಜುಲೈ ತಿಂಗಳ ಎರಡನೇ ವಾರ ಮತ್ತು ಆಗಸ್ಟ್ ತಿಂಗಳ ಮೊದಲ ವಾರದಲ್ಲಿ ಬಿತ್ತನೆ ಮಾಡಿರುವ ರಾಗಿ ಬೆಳೆಯಲ್ಲಿ ಕಳೆ ನಿರ್ವಹಣೆ, ಮಣ್ಣು ಮತ್ತು ನೀರಿನ ಸಂರಕ್ಷಣೆಗೆ ಅಂತರ ಬೇಸಾಯವನ್ನು ಕೈಗೊಳ್ಳುವುದು.<br>➢ ಮೆಕ್ಕೆಜೋಳ ಬೆಳೆಯಲ್ಲಿ ಕಾಂಡಕೊರಕದ ಹುಳುವಿನ ಹತೋಟಿಗೆ ಕ್ವಿನಾಲ್‌ಫಾಸ್–25 ಇ.ಸಿ. ಕೀಟನಾಶಕವನ್ನು 2 |

| | |
|---|---|
| | ಮಿ.ಲೀ/ಪ್ರತಿ ಲೀ. ನೀರಿನಲ್ಲಿ ಬೆರೆಸಿ ಸಿಂಪಡಿಸಿ. ಅಥವಾ ಕ್ಲೋರೋಪೈರಿಫಾಸ್–20 ಇ.ಸಿ. ಕೀಟನಾಶಕವನ್ನು 2 ಮಿ.ಲೀ/ಪ್ರತಿ ಲೀ. ನೀರಿನಲ್ಲಿ ಬೆರೆಸಿ ಸಿಂಪಡಿಸಿ.<br>➢ ಇಳಿಜಾರಿಗೆ ಅಡ್ಡಲಾಗಿ ಉಳುಮೆಯನ್ನು ಮಾಡಿ ಇದರಿಂದ ಮಣ್ಣಿನ ಸವಕಳಿ ಕಡಿಮೆಯಾಗುತ್ತದೆ ಮತ್ತು ತೇವಾಂಶದ ಸಂರಕ್ಷಣೆಯಾಗುತ್ತದೆ.<br><br>**ಎರಡುಬೆಳೆ ಪದ್ಧತಿಯಲ್ಲಿ ಈ ಕೆಳಗಿನ ಮಧ್ಯಮಾವಧಿ ಮತ್ತು ಕಡಿಮೆ ಅವಧಿ ತಳಿಗಳನ್ನು ಬಿತ್ತನೆ ಮಾಡಲು ಸೂಚಿಸಲಾಗಿದೆ**<br>ಮೇ ತಿಂಗಳಲ್ಲಿ ಬಿತ್ತಿದ ಪೂರ್ವ ಮುಂಗಾರು ಬೆಳಗಳನ್ನು ಕಟಾವು ಮಾಡಿ ತಕ್ಷಣ ತಡವಾದ ಮುಂಗಾರು ಬೆಳೆಗಳಾದ ರಾಗಿ: ಕೆ.ಎಮ್.ಆರ್–301, ಇಂಡಾಫ್ 5,7 ಮತ್ತು 9, ಹಾಗು ಎಂ.ಎಲ್–365, ಜಿ.ಪಿ.ಯು-26, 45 & 48 ರಾಗಿ ತಳಿಗಳನ್ನು ಬಿತ್ತನೆ ಮಾಡಬಹುದು<br>ಅಲಸಂದೆ : ಟಿ.ವಿ.ಎಕ್ಸ್–944, ಕೆ.ಬಿ.ಸಿ–1, ಅವರೆ–ಎಚ್.ಎ–3 ಮತ್ತು 4,ಸೂರ್ಯಕಾಂತಿ: ಕೆ.ಬಿ.ಎಸ್.ಹೆಚ್–1,41,42,44 ಮತ್ತು 53, ಹುರುಳಿ: ಪಿ.ಎಚ್.ಜಿ–9 ಮತ್ತು ಕೆ.ಬಿ.ಎಚ್–1, ಹುಚ್ಚೆಳ್ಳು ತಳಿಗಳನ್ನು ಆಗಸ್ಟ್ ತಿಂಗಳ ಒಳಗಾಗಿ ಬಿತ್ತನೆ/ನಾಟಿ ಮಾಡುವುದು.<br>ಮುಸುಕಿನ ಜೋಳ: ಗಂಗಾ–11, ಡೆಕ್ಕನ್–103, ವಿಜಯ ಕಾಂಪೋಸಿಟ್, ಕಾಂಪೋಸಿಟ್ ಎನ್.ಎ.ಸಿ–6004,6002, ನಿತ್ಯಶ್ರೀ–ಸಂಕರಣ ತಳಿ ಮತ್ತು ಹೇಮ –ಸಂಕರಣ ತಳಿ ಬಿತ್ತಲು ಸೂಚಿಸಲಾಗಿದೆ.<br>ಮೇಲಿನ ಮುಸುಕಿನ ಜೋಳ ತಳಿಗಳು ಕೇದಿಗೆ ರೋಗ, ಎಲೆ ಅಂಗಮಾರಿ ರೋಗ ಮತ್ತು ಕಾಂಡ ಕೊರೆಯುವ ಕೀಟ ನಿರೋಧಕ ಶಕ್ತಿ ಹೊಂದಿವೆ. |
| **ಮಾವು** | ➢ ಮಾವಿನಲ್ಲಿ ಒತ್ತಾಗಿ ಬೆಳೆದಿರುವ ರೆಂಬೆಗಳನ್ನು ಕತ್ತರಿಸಬೇಕು ಇದರಿಂದ ಸೂರ್ಯನ ಬೆಳಕು ಒಳಬಾಗಕ್ಕೆ ಬೀಳುತ್ತದೆ ಇದರಿಂದ ಒಳಭಾಗದಲ್ಲೂ ಮುಂದಿನ ಬಾರಿ ಹೂ ಮತ್ತು ಕಾಯಿ ಕಚ್ಚುತ್ತವೆ. |
| | **ಹೈನುಗಾರಿಕೆ** |
| **ಪಶುಸಂಗೋಪನೆ** | ➢ ಬಿಸಿಲು, ಮಳೆ ಮತ್ತು ಬೀಸು ಗಾಳಿಯನ್ನು ತಪ್ಪಿಸಲು ಕೋಳಿ ಮನೆಯನ್ನು ಪೂರ್ವ–ಪಶ್ಚಿಮಕ್ಕೆ ಉದ್ದುದ್ದವಾಗಿ ಆಯಾಕಾರವಾಗಿ ಕಟ್ಟುವುದು ಸೂಕ್ತ.<br>➢ ಸೂಕ್ತವಾದ ಹವಾಮಾನ ಮತ್ತು ಯತೇಚ್ಚ ಮೇವು ಸಿಗುವುದರಿಂದ ಹೈನುಗಾರಿಕೆ, ಹಂದಿ ಸಾಕಾಣಿಕೆ, ಕುರಿ ಮತ್ತು ಮೇಕೆ ಸಾಕಾಣಿಕೆಗೆ ಅನುವು ಮಾಡಿಕೊಡುತ್ತದೆ.<br>➢ ಹೈನುಗಾರಿಕೆಯಲ್ಲಿ ರೋಗಗಳ ನಿಯಂತ್ರಣಕ್ಕೆ ಪ್ರತಿ ವರ್ಷ ಲಸಿಕೆಯನ್ನು ಮಾಡಿಸುವುದು ಉತ್ತಮ.<br>➢ ಹಿಂಡಿ ಬೂಸವನ್ನು ಮೂರು–ನಾಲ್ಕು ಭಾಗ ಮಾಡಿ ಹಗಲಿನಲ್ಲಿ ಸಂಜೆ ಮತ್ತು ರಾತ್ರಿಯಲ್ಲಿ ತಿನ್ನಿಸುವುದು ಉತ್ತಮ.<br>➢ ಹೆಚ್ಚು ಕರಾವು ಕೊಡುವ ರಾಸುಗಳ ಆಹಾರದಲ್ಲಿ ಕನಿಷ್ಠ ಶೇ. 17 ರಷ್ಟು ನಾರಿನ ಅಂಶವಿರಬೇಕು ( ಎನ್.ಡಿ.ಎಫ್. ಶೇ.22 ರಷ್ಟಿರಬೇಕು.) |


**ನೋಡಲ್ ಅಧಿಕಾರಿ:**
ಕೃಷಿ ಹವಾಮಾನ ವಿಭಾಗ
**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**


**ಮೊಬೈಲ್ ಆಫ್:**

- ➢ ರೈತರು "ದಾಮಿನಿ" ಎಂಬ ತಂತ್ರಾಂಶವನ್ನು ಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ➢ ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗೆ *mausam.imd.gov.in* ಜಾಲತಾಣದಲ್ಲಿ ಮಾಹಿತಿ ಪಡೆಯಿರಿ.